ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 29–02–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಸುಧಾರಿತ ಮಾವು ಬೇಸಾಯ ಮತ್ತು ಮಾರುಕಟ್ಟೆ ಕುರಿತು ಒಂದು ದಿನದ ಕಾರ್ಯಾಗಾರ.<br><br>ಉದ್ಘಾಟನೆ:<br><br>ಡಾ. ಶಾಮನೂರು ಶಿವಶಂಕರಪ್ಪ ತೋಟಗಾರಿಕೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು<br><br>ಕೈಪಿಡಿ ಬಿಡುಗಡೆ:<br><br>ಶ್ರೀ ಕೆ. ಜೆ. ಜಾರ್ಜ್,<br>ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರು.<br><br>ನಿಗಮದ ವೆಬ್‌ಸೈಟ್ ಲೋಕಾರ್ಪಣೆ:<br><br>ಶ್ರೀ ಹೆಚ್. ಸಿ. ಮಹದೇವಪ್ಪ,<br>ಲೋಕೋಪಯೋಗಿ ಸಚಿವರು | 01–03–2016<br>ಮಂಗಳವಾರ<br>ಬೆಳಿಗ್ಗೆ<br>11–00 ಗಂಟೆಗೆ | ತೋಟಗಾರಿಕೆ ಮಾಹಿತಿ ಕೇಂದ್ರ,<br>ಲಾಲ್‌ಬಾಗ್,<br>ಬೆಂಗಳೂರು. |

| | | | |
|---|---|---|---|
| | **ಅಧ್ಯಕ್ಷತೆ:**<br><br>ಶ್ರೀ ಆರ್. ವಿ. ದೇವರಾಜ್,<br>ಶಾಸಕರು,<br>ಚಿಕ್ಕಪೇಟೆ ಕ್ಷೇತ್ರ.<br><br>**ಮುಖ್ಯ ಅತಿಥಿ:**<br><br>ಶ್ರೀ ಅನಂತ ಕುಮಾರ್,<br>ಕೇಂದ್ರ ರಾಸಾಯನಿಕ ಹಾಗೂ<br>ರಸಗೊಬ್ಬರಗಳ ಸಚಿವರು | | |
| 2. | ಪತ್ರಿಕಾಗೋಷ್ಠಿ:<br><br>ಅಡಗೂರು ಎಚ್. ವಿಶ್ವನಾಥ್,<br>ಅಧ್ಯಕ್ಷರು, ಅರಸು ಶತಮಾನೋತ್ಸವ<br>ಕಾರ್ಯಕಾರಿ ಸಮಿತಿ. | 01-03-2016<br>ಮಂಗಳವಾರ<br>ಬೆಳಿಗ್ಗೆ<br>11-00 ಗಂಟೆಗೆ | ಅಂತರಂಗ,<br>ಕನ್ನಡ ಭವನ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಸಾಕ್ಷ್ಯಚಿತ್ರಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 29 (ಕರ್ನಾಟಕ ವಾರ್ತೆ)

ಕರ್ನಾಟಕ ಜಾನಪದ ಅಕಾಡೆಮಿಯು 2015-16 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಿರಿಯ ಜಾನಪದ ಕಲಾವಿದರು, ಅಕಾಡೆಮಿ, ರಾಜ್ಯೋತ್ಸವ, ಜಾನಪದಶ್ರೀ ಪ್ರಶಸ್ತಿ ಪಡೆದಿರುವ ಜಾನಪದ ಕಲಾವಿದರ, ಸಾಕ್ಷ್ಯಚಿತ್ರ (ಆತ್ಮಕಥನ) ನಿರ್ಮಾಣದ ಯೋಜನೆಯನ್ನು ಹಮ್ಮಿಕೊಂಡಿದೆ.

ಸಾಕ್ಷ್ಯಚಿತ್ರ ನಿರ್ಮಾಣಕ್ಕಾಗಿ ನಿರ್ದೇಶನ, ತಾಂತ್ರಿಕ ಪರಿಣಿತಿ ಹೊಂದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಂದ ತಮ್ಮ ಅನುಭವದ ಮಾಹಿತಿಯೊಂದಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಮಾರ್ಚ್ 8 ಕೊನೆಯ ದಿನವಾಗಿರುತ್ತದೆ. ಅರ್ಜಿಯನ್ನು ಆಯಾಯ ಜಿಲ್ಲೆಯ ಸಹಾಯಕ ನಿರ್ದೇಶಕರುಗಳ ಕಚೇರಿಯಿಂದ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಕಚೇರಿಯಿಂದ ಪಡೆಯಬಹುದಾಗಿದೆ. ಅಕಾಡೆಮಿಯ ವಿಳಾಸ ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 02 ರಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080–22215609 ಮೂಲಕ ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್.

## ಕನ್ನಡ ಚಲನಚಿತ್ರ ಸಿಂಹಾವಲೋಕನ – ಸಾಧಕರಿಗೆ ಸನ್ಮಾನ

ಬೆಂಗಳೂರು, ಫೆಬ್ರವರಿ 29 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಮಾರ್ಚ್ 3 ರಂದು ಸಂಜೆ 5–30 ಗಂಟೆಗೆ ಕನ್ನಡ ವಾಕ್ಚಿತ್ರ ಹುಟ್ಟು ಹಬ್ಬದ ಅಂಗವಾಗಿ ಕನ್ನಡ ಚಲನಚಿತ್ರ ಸಿಂಹಾವಲೋಕನ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಬೆಂಗಳೂರು ವಸಂತನಗರದ ಮಿಲ್ಲರ್ಸ್ ರಸ್ತೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದೆ.

ಮೂಲ ಸೌಲಭ್ಯ ಅಭಿವೃದ್ಧಿ ವಾರ್ತಾ ಮತ್ತು ಸಾರ್ವಜನಿಕ ಸಂಪಕ ಹಾಗೂ ಹಜ್ ಖಾತೆ ಸಚಿವ ಶ್ರೀ ಆರ್. ರೋಷನ್‌ಬೇಗ್ ಅವರು ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸುವರು. ವಸತಿ ಸಚಿವ ಡಾ. ಎಂ.ಹೆಚ್. ಅಂಬರೀಶ್ ಅವರು ಸಾಧಕರಿಗೆ ಸನ್ಮಾನವನ್ನು ಮಾಡಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ವಹಿಸಲಿದ್ದಾರೆ.

ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ಎಸ್. ವಿ. ರಾಜೇಂದ್ರಸಿಂಗ್ ಬಾಬು ಅವರು ಪ್ರಾಸ್ತಾವಿಕವಾಗಿ ಮಾತನಾಡುವರು. ಸಾಹಿತಿಗಳು, ಚಲನಚಿತ್ರ ನಿರ್ದೇಶಕ ಪುಟ್ಟಣ್ಣ ಕಣಗಾಲ್ ಪ್ರಶಸ್ತಿ ಪುರಸ್ಕೃತರಾದ ಡಾ. ಬರಗೂರು ರಾಮಚಂದ್ರಪ್ಪ ಅವರು ಕನ್ನಡ ಚಿತ್ರರಂಗದ ಬೆಳವಣಿಗೆ ಒಂದು ವಿಶ್ಲೇಷಣಾತ್ಮಕ ನೋಟ ಕುರಿತಂತೆ ಮಾತನಾಡುವರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯ ಶ್ರೀ ಪಿ.ಸಿ. ಮೋಹನ್, ಕನ್ನಡ ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ ಕಾರ್ಯದರ್ಶಿ ಡಾ. ಎನ್.ಎಸ್. ಚನ್ನಪ್ಪಗೌಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಶ್ರೀ ಎನ್.ಆರ್. ವಿಶುಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಶ್ರೀ ಸಾ.ರಾ. ಗೋವಿಂದು ಪಾಲ್ಗೊಳ್ಳಲಿದ್ದಾರೆ.

ಕನ್ನಡ ಚಲನಚಿತ್ರರಂಗದ ಖ್ಯಾತ ನಟರಾದ ಶ್ರೀ ಪುನೀತ್ ರಾಜ್‍ಕುಮಾರ್ ಹಾಗೂ ಶ್ರೀ ದರ್ಶನ್ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಅಂದು ಸಂಜೆ 5.00 ಗಂಟೆಗೆ ಕನ್ನಡ ಚಲನಚಿತ್ರ ಗೀತೆಗಳ ಗಾಯನವನ್ನು ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ವಿಧಾನ ಮಂಡಲದ ಜಂಟಿ ಅಧಿವೇಶನ : ರಾಜ್ಯಪಾಲರ ಭಾಷಣ

ಬೆಂಗಳೂರು, ಫೆಬ್ರವರಿ 29 (ಕರ್ನಾಟಕ ವಾರ್ತೆ)

ಇಂದು ಆರಂಭಗೊಂಡ ಕರ್ನಾಟಕ ವಿಧಾನ ಮಂಡಲದ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಕರ್ನಾಟಕದ ರಾಜ್ಯಪಾಲ ಶ್ರೀ ವಾಜುಭಾಯಿ ವಾಲ ಅವರು ಭಾಷಣ ಮಾಡಿದರು.

ವಿಧಾನಸೌಧಕ್ಕೆ ಆಗಮಿಸಿದ್ದ ರಾಜ್ಯಪಾಲರನ್ನು ವಿಧಾನಸಭೆ ಅಧ್ಯಕ್ಷ್ಯ ಶ್ರೀ ಕಾಗೋಡು ತಿಮ್ಮಪ್ಪ, ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಡಿ.ಹೆಚ್. ಶಂಕರಮೂರ್ತಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರುಗಳು ಸಾಂಪ್ರದಾಯಕ ರೀತಿಯಲ್ಲಿ ಸ್ವಾಗತಿಸಿದರು.

ರಾಜ್ಯಪಾಲರ ಭಾಷಣದ ನಂತರ ಪ್ರತ್ಯೇಕವಾಗಿ ಸಮಾವೇಶಗೊಂಡ ವಿಧಾನಸಭೆಯಲ್ಲಿ ಹೆಬ್ಬಾಳ ಕ್ಷೇತ್ರದ ನೂತನ ಶಾಸಕ ಎ. ನಾರಾಯಣಸ್ವಾಮಿ ಹಾಗೂ ಬೀದರ್ ಕ್ಷೇತ್ರ ನೂತನ ಶಾಸಕ ರಹೀಂ ಖಾನ್ ಅವರುಗಳು ವಿಧಾನಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಬಾಬು:ಜಿಪಿಅರ್